ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ಸಚಿವರ ಭರವಸೆ, ಪ್ರತಿಪಕ್ಷ ಧರಣಿ ಅಂತ್ಯ

ವಿಧಾನ ಪರಿಷತ್ತು: ಮಂಡ್ಯ ಜಿಲ್ಲೆಯಲ್ಲಿ ಸಕ್ರಮವಾಗಿ ನಡೆಯುತ್ತಿರುವ ಕಲ್ಲುಗಣಿಗಾರಿಕೆಯನ್ನು ಮತ್ತೆ ಆರಂಭಿಸುವ ಕುರಿತು ಸಭೆ ನಡೆಸಿ ತೀರ್ಮಾನಿಸಲಾಗುವುದು ಎಂದು ಗಣಿ ಮತ್ತು ಭೂ ವಿಜ್ಞಾನ ಸಚಿವ ಸಿ.ಸಿ. ಪಾಟೀಲ್ ನೀಡಿದ



ಭರವಸೆಯಿಂದ ಪ್ರತಿಪಕ್ಷಗಳು ಧರಣಿಯನ್ನು ಕೈಬಿಟ್ಟವು. ಸದನದ ಕಲಾಪ ಆರಂಭವಾಗುತ್ತಿದ್ದಂತೆಯೇ ಶುಕ್ರವಾರ ಆರಂಭಿಸಿದ್ದ ಧರಣಿಯನ್ನು ಪ್ರತಿಪಕ್ಷಗಳ ಸದಸ್ಯರು ಮುಂದುವರೆಸಿದರು. ಈ ವೇಳೆ ಸಚಿವ ಸಿ.ಸಿ. ಪಾಟೀಲ್ ಮಾತನಾಡಿ, ಮಂಡ್ಯ ಜಿಲ್ಲೆಯ ಟಿ.ಜಿ. ಸ್ಟೋನ್ ಕ್ರಷರ್ ಸಂಸ್ಥೆ ನಿಯಮ ಬದ್ಧವಾಗಿ ನಡೆಯುತ್ತಿದೆ ಎಂದು ಹೇಳಿದ್ದೀರಿ. ಅದನ್ನು ಪರಿಶೀಲನೆ ಮಾಡಲಾಗುತ್ತದೆ. ಯಾವುದೇ ತೊಂದರೆ ಇಲ್ಲ ಎಂದರೆ ಅದನ್ನು ಮುಂದುವರೆಸಲಾಗುವುದು. ಈ ಬಗ್ಗೆ ಶಾಸಕರು ಹಾಗೂ ಅಧಿಕಾರಿಗಳ ಜೊತೆ ಸಭೆ ನಡೆಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಇದಕ್ಕೆ ಯಾವಾಗ ತೀರ್ಮಾನ ತೆಗೆದುಕೊಳ್ಳುತ್ತೀರಿ ಎಂಬ ಪ್ರತಿಪಕ್ಷಗಳ ಸದಸ್ಯರ ಪ್ರಶ್ನೆಗೆ ಈ ಅಧಿವೇಶನ ಮುಗಿದ ನಂತರ ಸಭೆ ಕರೆಯುವುದಾಗಿ ಹೇಳಿದರು. ಇದನ್ನು ಒಪ್ಪದ ಸದಸ್ಯರು ಈ ದಿನವೇ ಸಭೆ ಮಾಡಿ ಎಂದು ಪಟ್ಟು ಹಿಡಿದರು. ಆದರೆ, ಅದಕ್ಕೆ ಸಚಿವರು ಉತ್ತರಿಸಿ, ಈಗ ಸದನ ನಡೆಯುತ್ತಿದೆ. ಸದನದ ಕೊನೆಯ ದಿನ ಸಭೆ ಕರೆಯಲಾಗುವುದು ಎಂದು ಭರವಸೆ ನೀಡಿದರು. ಇದಕ್ಕೆ ಸಹಮತ ಸೂಚಿಸಿ ಪ್ರತಿಪಕ್ಷಗಳ ಸದಸ್ಯರು ಪ್ರತಿಭಟನೆಯನ್ನು ಹಿಂತೆಗೆದುಕೊಂಡರು.